# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 121(114)

ಮಾನ್ಯ ಸದಸ್ಯರ ಹೆಸರು: ಡಾ: ತಳವಾರ್ ಸಾಬಣ್ಣ (ನಾಮ ನಿರ್ದೇಶನ ಹೊಂದಿದವರು)

ಉತ್ತರಿಸುವ ಸಚಿವರು: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಉತ್ತರಿಸಬೇಕಾದ ದಿನಾಂಕ: **11.08.2025**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರಿಗೆ ಚುನಾವಣೆ ಸೇರಿ ಹಲವಾರು ಕೆಲಸಗಳಿಗೆ ನಿಯೋಜನೆ ಮಾಡುತ್ತಿರುವುದರಿಂದ ರಾಜ್ಯದಲ್ಲಿ ಶಿಕ್ಷಣದ ಗುಣಮಟ್ಟ ಕುಸಿಯುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ: | ಹೌದು. |
| ಆ) | ಚುನಾವಣೆ, ಜಾತಿಗಣತಿ, ಮತದಾರರ ಪಟ್ಟಿ ಪರಿಷ್ಕರಣೆ, ಸ್ಪರ್ಧಾತ್ಮಕ ಪರೀಕ್ಷೆಗಳ ಮೇಲ್ವಿಚಾರಣೆ, ತರಬೇತಿ, ಸಾಮಗ್ರಿಗಳ ಖರೀದಿ ಹೀಗೆ ಹತ್ತಾರು ಕೆಲಸಗಳನ್ನು ಶಿಕ್ಷಕರಿಗೆ ಹೆಚ್ಚುವರಿಯಾಗಿ ಹಾಕುತ್ತಿರುವುದರಿಂದ ಮಕ್ಕಳಿಗೆ ಪಾಠ ಮಾಡಲು ಸಾಧ್ಯವೆ: | ಮಾನ್ಯ ಸರ್ವೋಚ್ಚ ನ್ಯಾಯಾಲಯದ ಅಪೀಲ್ ಸಂಖ್ಯೆ: 5659/2007ರಲ್ಲಿ ಚುನಾವಣಾ ಕಾರ್ಯಕ್ಕೆ ನಿಯೋಜಿಸಲು ನೀಡಿರುವ ನಿರ್ದೇಶನ ಮತ್ತು ಭಾರತ ಚುನಾವಣಾ ಆಯೋಗದ ಮತದಾರರ ಪಟ್ಟಿಗಳ ಕೈಪಿಡಿ ಅಕ್ಟೋಬರ್ 2016ರ ಅಧ್ಯಾಯ 5ರ ಪ್ಯಾರಾ 5.2 ಮತಗಟ್ಟೆ ಮಟ್ಟದ ಅಧಿಕಾರಿಗಳ ನಿಯೋಜನೆಗೆ 13 ವಿವಿಧ ಹುದ್ದೆಗಳ ವಿವರ ನೀಡಲಾಗಿರುತ್ತದೆ, ಈ ಹಿನ್ನಲೆಯಲ್ಲಿ ತೀರಾ ಅನಿವಾರ್ಯ ಸಂದರ್ಭಗಳಲ್ಲಿ ಕೆಲವೊಂದು ಷರತ್ತಿನ ಮೇರೆಗೆ ಕಾರ್ಯಗಳನ್ನು ನಿರ್ವಹಿಸಲು ಸೂಚಿಸಲಾಗುತ್ತಿದೆ. |
| ಇ) | ಕ್ಲಸ್ಟರ್/ಕ್ಷೇತ್ರ ಶಿಕ್ಷಣಾಧಿಕಾರಿಗಳು ತಕ್ಷಣವೇ ಮಾಹಿತಿ ಬೇಕು ಎಂದು ಶಿಕ್ಷಕರಿಗೆ ಒತ್ತಾಯ ಮಾಡುವುದರಿಂದ ಮಕ್ಕಳ ಶೈಕ್ಷಣಿಕ ಚಟುವಟಿಕಗಳನ್ನು ನಿಲ್ಲಿಸಿ ಮೊಬೈಲ್‌ನಲ್ಲಿ ಮಾಹಿತಿ ಒದಗಿಸಲು ಸಮಯ ವ್ಯಯ ಮಾಡುವುದು ಸೂಕ್ತವೇ: | ಮಧ್ಯಾಹ್ನ ಉಪಹಾರ ಯೋಜನೆ, ಹಾಲು, ಮೊಟ್ಟೆ ಇನ್ನಿತರೆ ಪ್ರೋತ್ಸಾಹದಾಯಕ ಯೋಜನೆಗಳ ಮಾಹಿತಿಯನ್ನು ಪಡೆಯಲು ಅನಿವಾರ್ಯ ಸಂದರ್ಭ ಮಾತ್ರ ಶೈಕ್ಷಣಿಕ ಹಿತಾಸಕ್ತಿಗೆ ಧಕ್ಕೆಯಾಗದಂತೆ ಮಾಹಿತಿ ಪಡೆಯಲಾಗುತ್ತಿದೆ. |

| | | |
|---|---|---|
| ಈ) | ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೇ.60 ಕ್ಕಿಂತ ಕಡಿಮೆ ಅಂಕ ಬಂದ ಶಾಲೆಗಳ ಶಿಕ್ಷಕರ ವೇತನ ಬಡ್ತಿಯನ್ನು ತಡೆಯುವುದು ಸರಿಯೇ | **ಅನುದಾನಿತ ಶಾಲೆಗೆ ಸಂಬಂಧಿಸಿದಂತೆ**<br><br>ರಾಜ್ಯದ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿನ ಶಿಕ್ಷಕರ ಹುದ್ದೆಗಳ ಕುರಿತು ಸರ್ಕಾರದ ಆದೇಶ ಸಂಖ್ಯೆ: ಇಡಿ 14 ಎಸ್ಇಪಿ 2017 ದಿನಾಂಕ:06/03/2019 ರಲ್ಲಿ ಈ ಕೆಳಕಂಡಂತೆ ತಿಳಿಸಲಾಗಿದೆ.<br>1. ಈಗಾಗಲೇ ಅನುದಾನಕ್ಕೆ ಒಳಪಟ್ಟಿರುವ ಶಾಲೆಯ ವಿಷಯವಾರು ಫಲಿತಾಂಶವನ್ನು ಪರಿಗಣಿಸಿ ಶೇ.60 ಕ್ಕಿಂತ ಕಡಿಮೆ ಫಲಿತಾಂಶವನ್ನು ಪಡೆದಿರುವ ವಿಷಯ ಶಿಕ್ಷಕರನ್ನು ಗುರುತಿಸಿ ಅಂತಹವರ ವಾರ್ಷಿಕ ವೇತನ ಬಡ್ತಿಯನ್ನು ತಡೆಹಿಡಿಯುವುದು.<br>2. ಅನುದಾನ ಪಡೆಯುತ್ತಿರುವ ವಿಷಯ ಶಿಕ್ಷಕರು ನಿರಂತರ ಮೂರು ವರ್ಷಗಳಲ್ಲಿ ಶೇ.60 ಕ್ಕಿಂತ ಕಡಿಮೆ ಫಲಿತಾಂಶ ನೀಡಿದಲ್ಲಿ ಅಂತಹ ವಿಷಯ ಶಿಕ್ಷಕರ ವೇತನಾನುದಾನವನ್ನು ತಡೆಹಿಡಿಯುವುದು.<br>3. ಒಂದು ಅನುದಾನಿತ ಪ್ರೌಢಶಾಲೆಯು ಸತತ ಐದು ವರ್ಷಗಳಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಲ್ಲಿ ಐದು ವರ್ಷಗಳು ನಿರಂತರವಾಗಿ ಕನಿಷ್ಟ ಶೇ. 50 ವಿದ್ಯಾರ್ಥಿಗಳು ಉತ್ತೀರ್ಣರಾಗದಿದ್ದಲ್ಲಿ ಶಾಲೆಗೆ ನೀಡಲಾಗುತ್ತಿರುವ ವೇತನಾನುದಾನವನ್ನು ತೆಡೆಹಿಡಿಯುವುದು.<br>4. ಖಾಲಿ ಹುದ್ದೆಗೆ ಎದುರಾಗಿ ಅನುದಾನಕ್ಕೆ ಒಳಪಡುವ ವಿಷಯ ಶಿಕ್ಷಕರ |
| | | ಸಂಬಂಧಪಟ್ಟ ವಿಷಯದಲ್ಲಿ ಶೇ. 60ಕ್ಕಿಂತ ಕಡಿಮೆ ಫಲಿತಾಂಶ ಬಂದಲ್ಲಿ ಅವರ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು ತೆಡೆಹಿಡಿಯುವುದು. ನಿರಂತರವಾಗಿ ಮೂರು ವರ್ಷಗಳು ವಿಫಲವಾದಲ್ಲಿ ಅವರ ವೇತನಾನುದಾನವನ್ನು ಹಿಂಪಡೆಯುವುದು. |

| | | |
|---|---|---|
| | | ಸದರಿ ಆದೇಶದಂತೆ 2024-25ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆಯ ಫಲಿತಾಂಶವನ್ನು ಪರಿಶೀಲಿಸಿ ಸಂಬಂಧಪಟ್ಟ ಶಾಲೆಗಳನ್ನು ಮತ್ತು ಶಿಕ್ಷಕರುಗಳನ್ನು ಗುರುತಿಸಿ ಅವರ ನಿರ್ದಿಷ್ಟ ಪಾತ್ರವಿದ್ದಲ್ಲಿ ಕ್ರಮವಹಿಸಲು ತಿಳಿಸಲಾಗಿದೆ.<br><br>**ಸರ್ಕಾರಿ ಶಾಲೆಗೆ ಸಂಬಂಧಿಸಿದಂತೆ**<br><br>ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ-12ರಡಿ ಸಂಬಂಧಿಸಿದ ಶಾಲೆ / ತಾಲ್ಲೂಕು / ಜಿಲ್ಲಾ ಮುಖ್ಯಸ್ಥರುಗಳಿಗೆ ನೋಟೀಸ್ ಜಾರಿಗೊಳಿಸಿದೆ. |
| ಉ) | ಮಕ್ಕಳಿಗೆ ಕಲಿಸಲು ನೇಮಕಗೊಂಡಿರುವ ಶಿಕ್ಷಕರನ್ನು ಪಠ್ಯೇತರ/ಬೋಧಕೇತರ ಚಟುವಟಿಕೆಗಳಿಗೆ ಬಳಸಿಕೊಳ್ಳದೆ ಮಕ್ಕಳ ಶೈಕ್ಷಣಿಕ ಚಟುವಟಿಕೆಗಳಲ್ಲಿ ಸಂಪೂರ್ಣವಾಗಿ ತೊಡಗಿಸಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳಬಹುದೇ? | ಈ ಕುರಿತು ಸರ್ಕಾರದ ದಿನಾಂಕ:01.07.2025ರ ಸುತ್ತೋಲೆಯಲ್ಲಿ ಶಿಕ್ಷಕರನ್ನು ಶೈಕ್ಷಣಿಕ ಚಟುವಟಿಕೆಗಳಲ್ಲಿ ಗರಿಷ್ಠ ಪ್ರಮಾಣದಲ್ಲಿ ತೊಡಗಿಸಿಕೊಳ್ಳಲು ಸ್ಪಷ್ಟವಾದ ಸೂಚನೆಗಳನ್ನು ನೀಡಲಾಗಿದೆ. |

**ಇಪಿ 78 ಪಿಎಂಎ 2025**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು